ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ: .ಸಿ7(8)ಆರ್.ಟಿ.ಇ/ಪ್ರಪ್ರ/2017-18. ದಿನಾಂಕ: 20.07.2017

**: : ಸುತ್ತೋಲೆ : :**

ವಿಷಯ:- 2017-18ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಖಾಸಗಿ ಶಾಲೆಗಳಲ್ಲಿ ಶಿಕ್ಷಣ ಹಕ್ಕು ಕಾಯಿದೆ ಅಡಿ 12(1)(ಸಿ) ಅಡಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಪಠ್ಯಪುಸ್ತಕಗಳನ್ನು ಒದಗಿಸುವ ಕುರಿತು.

ಉಲ್ಲೇಖ:- (1) ಸರ್ಕಾರದ ಆದೇಶ ಸಂಖ್ಯೆ:ಇಡಿ 04 ಮಾಹಿತಿ 2017 ದಿ:03-03-2017.
(2) ಈ ಕಛೇರಿಯ ಸಮ ಸುತ್ತೋಲೆ ಸಂಖ್ಯೆ: .ಸಿ7(8)ಆರ್.ಟಿ.ಇ/ಪ್ರಪ್ರ/2017-18. ದಿನಾಂಕ: 02.05.2017 ಮತ್ತು 25.05.2017

******

ಸರ್ಕಾರವು ಉಲ್ಲೇಖ (1)ರ ಆದೇಶದಲ್ಲಿ ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆಯಡಿ ಖಾಸಗಿ ಅನುದಾನರಹಿತ ಶಾಲೆಗಳಿಗೆ ಪ್ರವೇಶ ಕುರಿತು ಹೊರಡಿಸಿರುವ ಆದೇಶದ ಕಂಡಿಕೆ 10 ರಲ್ಲಿ ರಾಜ್ಯದ ಯಾವುದೇ ಖಾಸಗಿ ಶಾಲೆಯು ಪಠ್ಯಪುಸ್ತಕಗಳನ್ನು, ನೋಟ್‌ಪುಸ್ತಕಗಳನ್ನು, ಸಮವಸ್ತ್ರಗಳನ್ನು ಮತ್ತು ಇತರೆ ಲೇಖನ ಸಾಮಾಗ್ರಿಗಳನ್ನು ನಿರ್ಧಿಷ್ಠ ಮಾರಾಟಗಾರರಿಂದ ಖರೀದಿಸುವಂತೆ ಪಾಲಕರಿಗೆ ಒತ್ತಾಯಿಸುವುದನ್ನು ಅಥವಾ ಅವುಗಳನ್ನು ಶಾಲೆಯಿಂದಲೇ ಪಡೆಯುವಂತೆ ಒತ್ತಾಯಿಸುವುದನ್ನು ನಿರ್ಬಂಧಿಸಿ ಆದೇಶ ಹೊರಡಿಸಿದೆ.

ರಾಜ್ಯ ಪಠ್ಯಕ್ರಮವನ್ನು ಅನುಸರಿಸುತ್ತಿರುವ ಖಾಸಗಿ ಅಲ್ಪಸಂಖ್ಯಾತವಲ್ಲದ ಅನುದಾನರಹಿತ ಶಾಲೆಗಳಲ್ಲಿ ಮಕ್ಕಳ ಶಿಕ್ಷಣ ಹಕ್ಕು ಕಾಯಿದೆ ಸೆಕ್ಷನ್ 12(1)(ಸಿ) ರಡಿಯಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಸಂಘವು 2017-18 ನೇ ಸಾಲಿನಿಂದ ಉಚಿತವಾಗಿ ಪಠ್ಯಪುಸ್ತಕಗಳನ್ನು ಸರಬರಾಜು ಮಾಡುತ್ತದೆ. ಇದಕ್ಕಾಗಿ ಶಾಲೆಗಳು ಇಂತಹ ವಿದ್ಯಾರ್ಥಿಗಳಿಂದ ಪಠ್ಯಪುಸ್ತಕಗಳಿಗಾಗಿ ಕಡ್ಡಾಯವಾಗಿ ಯಾವುದೇ ಶುಲ್ಕವನ್ನು ಸಂಗ್ರಹಿಸುವಂತಿಲ್ಲ.

ಸರ್ಕಾರವು ಮೇಲೆ ಹೊರಡಿಸಿರುವ ಸೂಚನೆಗಳನ್ನು ಕಡ್ಡಾಯವಾಗಿ ಪರಿಪಾಲಿಸಬೇಕು. ತಪ್ಪಿದಲ್ಲಿ ಕರ್ನಾಟಕ ಶಿಕ್ಷಣ ಕಾಯಿದೆಯಡಿ ಸದರಿ ಶಾಲೆಗಳ ಮಾನ್ಯತೆಯನ್ನು ಹಿಂತೆಗೆದುಕೊಳ್ಳುವುದಲ್ಲದೆ ದಂಡವನ್ನು ಸಹ ವಿಧಿಸಲು ಕ್ರಮ ವಹಿಸಲಾಗುವುದು. ಈ ಬಗ್ಗೆ ತಮ್ಮ ಆಡಳಿತ ವ್ಯಾಪ್ತಿಗೆ ಒಳಪಡುವ ಸಂಬಂಧಪಟ್ಟ ಎಲ್ಲಾ ಶಾಲೆಗಳಿಗೆ ಕಟ್ಟುನಿಟ್ಟಾಗಿ ಸೂಚನೆಗಳನ್ನು ನೀಡುವುದು.

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)(ಹೆ.ಪ್ರ)

ಗೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ವಲಯ/ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಅಲ್ಪಸಂಖ್ಯಾತವಲ್ಲದ ಖಾಸಗಿ ಅನುದಾನರಹಿತ ಶಾಲೆಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ.
4. ಕಛೇರಿ ಪ್ರತಿ.